## ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 348 |
| ಮಾನ್ಯ ವಿಧಾನ ಪರಿಷತ್ತು ಸದಸ್ಯರ ಹೆಸರು | ಡಾ. ವೈ.ಎ ನಾರಾಯಣಸ್ವಾಮಿ |
| ಉತ್ತರಿಸಬೇಕಾದ ದಿನಾಂಕ | 07.07.2023 |
| ಉತ್ತರಿಸುವ ಸಚಿವರು | ಮಾನ್ಯ ಸಮಾಜ ಕಲ್ಯಾಣ ಸಚಿವರು |

| ಕ್ರ ಸಂ | ಪ್ರಶ್ನೆ | ಉತ್ತರ |
|---|---|---|
| ಅ | ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘವನ್ನು ಕರ್ನಾಟಕ ವಸತಿ ಶಿಕ್ಷಣ ನಿರ್ದೇಶನಾಲಯವನ್ನಾಗಿ ಬದಲಾಯಿಸುವ ಬಗ್ಗೆ ಬೇಡಿಕೆ ಪತ್ರಗಳು, ಶಿಫಾರಸ್ಸು ಪತ್ರಗಳು ಬಂದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೆ; | ಹೌದು.<br>• ರಾಜ್ಯದಲ್ಲಿ ವಿವಿಧ ವರ್ಗಗಳ ಗ್ರಾಮೀಣ ಪ್ರದೇಶದ ಬಡ ಮಕ್ಕಳ ಶೈಕ್ಷಣಿಕ ಅಭಿವೃದ್ಧಿಗಾಗಿ ಮತ್ತು ಎಲ್ಲಾ ವರ್ಗಗಳ ವಸತಿ ಶಾಲೆಗಳನ್ನು ಒಂದೇ ಸಂಸ್ಥೆಯ ಕಾರ್ಯವ್ಯಾಪ್ತಿಗೆ ಒಳಪಡಿಸುವ ಉದ್ದೇಶದಿಂದ ದಿನಾಂಕ:06-10-1999 ರಲ್ಲಿ "ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘ"ವನ್ನು ಪ್ರಾರಂಭಿಸಲಾಗಿದೆ.<br>• ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘವು ಕರ್ನಾಟಕ ಸಹಕಾರ ಸಂಘಗಳ ನೊಂದಣಿ ಕಾಯ್ದೆ 1960 ರನ್ವಯ ನೊಂದಣಿಯಾಗಿರುತ್ತದೆ.<br>• ಕರ್ನಾಟಕ ರಾಜ್ಯದ ಗ್ರಾಮೀಣ ಪ್ರದೇಶದ ಪರಿಶಿಷ್ಟ ಜಾತಿ, ಪರಿಶಿಷ್ಟ ವರ್ಗ ಮತ್ತು ಹಿಂದುಳಿದ ವರ್ಗದ ಬಡ ಮಕ್ಕಳ ಶೈಕ್ಷಣಿಕ ಅಭಿವೃದ್ಧಿಗಾಗಿ ಒಟ್ಟು 833 ವಸತಿ ಶಾಲೆ/ ಕಾಲೇಜುಗಳು ಕಾರ್ಯನಿರ್ವಹಿಸುತ್ತಿವೆ.<br>• ಸಂಘದ ಅಧೀನದಲ್ಲಿ ಕಾರ್ಯನಿರ್ವಹಿಸುತ್ತಿರುವ ವಸತಿ ಶಾಲೆಗಳು ಪರಿಶಿಷ್ಟ ಜಾತಿ/ ಪರಿಶಿಷ್ಟ ಪಂಗಡ ಮತ್ತು ಹಿಂದುಳಿದ ವರ್ಗಗಳ ವಸತಿ ಶಾಲೆಗಳಿಗೆ ಆಯಾ ಇಲಾಖೆಗಳಿಗೆ ನಿಗಧಿಪಡಿಸಿರುವ ಲೆಕ್ಕಶೀರ್ಷಿಕೆಯಡಿ ಅನುದಾನವನ್ನು ಬಿಡುಗಡೆ ಮಾಡಲಾಗುತ್ತಿದೆ. ಸಂಘಕ್ಕೆ ಪ್ರತ್ಯೇಕ ಡಿಡಿಓ ಕೋಡ್ ಲಭ್ಯವಿರುವುದಿಲ್ಲ.<br>• ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘದಡಿಯಲ್ಲಿ ಪರಿಶಿಷ್ಟ ಜಾತಿ/ ಪರಿಶಿಷ್ಟ ಪಂಗಡ ಮತ್ತು ಹಿಂದುಳಿದ ವರ್ಗಗಳ ವಸತಿ ಶಾಲೆಗಳನ್ನು ಅಭಿವೃದ್ಧಿ ಪಡಿಸಿ ವಿದ್ಯಾರ್ಥಿಗಳಿಗೆ ಹಾಗೂ ಸಿಬ್ಬಂದಿಗಳಿಗೆ ಅನುಕೂಲವಾಗುವಂತೆ ಸಂಘವು ಕಾರ್ಯ ನಿರ್ವಹಿಸುತ್ತಿದೆ.<br>• ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘವು ಒಂದು ಬೃಹತ್ ಸಂಸ್ಥೆಯಾಗಿದ್ದು, ಸಾರ್ವಜನಿಕ ಸಂಪರ್ಕಕ್ಕೆ ಅನುಕೂಲಕರವಾಗಿದೆ ಮತ್ತು ಮಕ್ಕಳ ವಿದ್ಯಾಭ್ಯಾಸಕ್ಕೆ ಒಳ್ಳೆಯ ವಾತಾವರಣ ಕಲ್ಪಿಸಿ ಕೊಡಲು ಅನುಕೂಲಕರ ವಾಗಿರುವುದರಿಂದ ನಿರ್ದೇಶನಾಲಯವನ್ನಾಗಿ ಮಾರ್ಪಡಿಸಲಾಗಿರುವುದಿಲ್ಲ. |
| ಆ | ಬಂದಿದ್ದಲ್ಲಿ, ಈ ಕುರಿತು ಸರ್ಕಾರದ ಸ್ಪಷ್ಟ ನಿಲುವೇನು; ನಿರ್ದೇಶನಾಲಯ ಮಾಡುವ ಪ್ರಕ್ರಿಯೆ ಪ್ರಾರಂಭವಾಗಿದೆಯೇ; ಪ್ರಾರಂಭವಾಗಿದ್ದಲ್ಲಿ ಪ್ರಕ್ರಿಯೆ ಯಾವ ಹಂತದಲ್ಲಿದೆ; ಇಲ್ಲದಿದ್ದಲ್ಲಿ, ಯಾವಾಗ ಪ್ರಕ್ರಿಯೆ ಪ್ರಾರಂಭ ಮಾಡಲಾಗುವುದು; | |
| ಇ | ನಿರ್ದೇಶನಾಲಯ ಮಾಡಲು ಅಡೆತಡೆಗಳೇನಾದರೂ ಇವೆಯೆ; ಇದ್ದಲ್ಲಿ ಅದರ ಸಮಸ್ಯೆಗೆ ಪರಿಹಾರಗಳೇನು; | |
| ಈ | ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘವನ್ನು ಕರ್ನಾಟಕ ವಸತಿ ಶಿಕ್ಷಣ ನಿರ್ದೇಶನಾಲಯ ಮಾಡಿ ಎಲ್ಲಾ ವಸತಿ ಶಾಲೆಗಳನ್ನು ನಿರ್ದೇಶನಾಲಯದಡಿ ತಂದು ಅಭಿವೃದ್ಧಿಪಡಿಸಿದ್ದಲ್ಲಿ ವಿದ್ಯಾರ್ಥಿಗಳಿಗೆ ಹಾಗೂ ಸಿಬ್ಬಂದಿಗಳಿಗೆ ಅನುಕೂಲವಾಗಲಿದೆ ಎಂಬುದು ಸರ್ಕಾರದ ಗಮನಕ್ಕೆ ಬಂದಿದೆಯೆ; ಈ ನಿಟ್ಟಿನಲ್ಲಿ ಸರ್ಕಾರ ತೆಗೆದುಕೊಳ್ಳುವ ಕ್ರಮಗಳೇನು? | |

ಸಕಇ-ಎಂಡಿಎಸ್/87/2023

(ಡಾ.ಹೆಚ್.ಸಿ. ಮಹದೇವಪ್ಪ)
ಸಮಾಜ ಕಲ್ಯಾಣ ಸಚಿವರು